ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ.,ರವರ ನ್ಯಾಯಾಲಯ, ಕಡೂರು

**ಸಿ.ಸಿ.ನಂ.1739/2016.**

ದಿನಾಂಕ:**26.11.2025** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು

| | | |
|---|---|---|
| ಸಾಕ್ಷಿಯ ಹೆಸರು | ನಂಜುಂಡಪ್ಪ | ಚಾಸಾ-4, ಪ್ರಾಸಾ-3 |
| ತಂದೆಯ ಹೆಸರು | ವೀರಭದ್ರಪ್ಪ | |
| ವಯಸ್ಸು (ವರ್ಷಗಳಲ್ಲಿ) | 72 | |
| ಉದ್ಯೋಗ | ನಿವೃತ್ತ ಹೆಚ್ ಸಿ | |
| ವಾಸ | ಬಿಸಲೇಹಳ್ಳಿ ಗ್ರಾಮ | |

ಮುಖ್ಯ ವಿಚಾರಣೆ: ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ:

ಆರೋಪಿತರು ನನಗೆ ಗೊತ್ತು ಅವರುಗಳು ನನ್ನ ಊರಿನವರು. ಚಾಸಾ 1 ರಿಂದ 3 ಗೊತ್ತಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ನಾನು ಯಾವುದೇ ಗಲಾಟೆಯನ್ನು ಕಣ್ಣಾರೆ ನೋಡಿಲ್ಲ. ಗಲಾಟೆ ನೋಡಿರುತ್ತೇನೆ ಎಂದು ಪೊಲೀಸರಿಗೆ ಹೇಳಿಕೆ ನೀಡಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಅಭಿಯೊಜನೆಯ ಪ್ರಕರಣಕ್ಕೆ ಪ್ರತಿಕೂಲವಾಗಿ ಸಾಕ್ಷ್ಯ ನುಡಿದಿರುವುದರಿಂದ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ, ಪಾಟೀ ಸವಾಲನ್ನು ಮಾಡಲು ಮಾನ್ಯ ಸ ಸ ಅ ರವರು ಅನುಮತಿಯನ್ನು ಕೋರಿದ್ದು ಅನುಮತಿ ನೀಡಲಾಯಿತು)

ಪಾಟೀಸವಾಲು: ಮಾನ್ಯ ಸ ಸ ಅ ರವರಿಂದ ಃ

ದಿ:08.05.2016 ರಂದು ಬೆಳಗ್ಗೆ 10.30 ಕ್ಕೆ ನಾನು ನಡೆದುಕೊಂಡು ಹೋಗುತ್ತಿದ್ದಾಗ ಚಾಸಾ 2 ರವರ ಮನೆಯ ಹಿಂದೆ ಏನೋ ಗಲಾಟೆಯ ಸದ್ದು ಕೇಳಿಸಿರುತ್ತದೆ ಎಂದರೆ ಸರಿಯಲ್ಲ. ನಾನು ಹೋಗಿ ನೋಡಿದಾಗ ಚಾಸಾ 2, ಆರೋಪಿತರು ಜಗಳ ಮಾಡುತ್ತಿದ್ದರು ಎಂದರೆ ಸರಿಯಲ್ಲ. ಚಾಸಾ2 ರವರನ್ನು 1 ನೇ ಆರೋಪಿಯು ಮನೆಯ ಜಗಲಿಯಿಂದ ನುಗ್ಗಿ ಒಂದು ಕಲ್ಲಿನಿಂದ ಹೊಡೆದು ಹಲ್ಲೆ ಮಾಡಿದರು ಎಂದರೆ ಸರಿಯಲ್ಲ. ನಂತರ 2, 3 ನೇ ಆರೋಪಿ ದೊಣ್ಣೆಯಿಂದ ಚಾಸಾ2 ರವರ ಮೈಕೈಗೆ ಹೊಡೆದರು ಎಂದರೆ ಸರಿಯಲ್ಲ. 4, 5 ನೇ ಆರೋಪಿತರು ಕೈಗಳಿಂದ ಚಾಸಾ 2 ರವರು

ಹೊಡೆದರು ಎಂದರೆ ಸರಿಯಲ್ಲ. ನಂತರ ಆರೋಪಿತರು ಚಾಸಾ 2 ರವರಿಗೆ ಕೊಲೆ ಬೆದರಿಕೆ ಹಾಕಿದರು ಎಂದರೆ ಸರಿಯಲ್ಲ. ನಂತರ ಚಾಸಾ 1 ರವರು ಗಲಾಟೆ ಬಿಡಿಸಿದರು ಎಂದರೆ ನನಗೆ ಗೊತ್ತಿಲ್ಲ. ಚಾಸಾ2 ರವರು ಹೆಚ್ಚಿನ ಪೆಟ್ಟಾದ ಕಾರಣ ಅವರು ಆಸ್ಪತ್ರೆಗೆ ಹೋಗಿರುತ್ತಾರೆ ಎಂದು ನನಗೆ ತಿಳಿದುಬಂರುತ್ತದೆ ಎಂದರೆ ಸರಿಯಲ್ಲ.

ಈ ಬಗ್ಗೆ ನಾನು ಈಗ ಓದಿ ಹೇಳಿದಂತೆ ದಿಃ19.05.2016 ರಂದು ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಅಲ್ಲಗಳೆದ ಹೇಳಿಕೆಯ ಭಾಗವನ್ನು ನಿಪಿ3 ಎಂದು ಗುರುತಿಸಲಾಯಿತು. ಈ ಎಲ್ಲಾ ವಿಚಾರಗಳು ಗೊತ್ತಿದ್ದರು ಸಹಃ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀಸವಾಲುಃ ಆರೋಪಿ ಪರ ಶ್ರೀ.ಪಿ ಸಿ ಆರ್ ವಕೀಲರಿಂದಃ</u> ಇರುವುದಿಲ್ಲ.
<u>ಮರು ವಿಚಾರಣೆ ಃ ಇಲ್ಲ</u>
(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸ ಇ ಒ,

sd/-
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಃದಃನ್ಯಾಃದಂ.,ರವರು, ಕಡೂರು.